# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1340(1625)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು

ವಿಷಯ : ಮಾದಕ ದ್ರವ್ಯ ಮತ್ತು ಅಕ್ರಮ ಗಾಂಜಾ ತಡೆಗಟ್ಟುವ ಬಗ್ಗೆ

(ಅ) ರಾಜ್ಯಾದ್ಯಂತ ಮಾದಕ ದ್ರವ್ಯ ಮತ್ತು ಅಕ್ರಮ ಗಾಂಜಾ ದಂಧೆ ನಡೆಯುತ್ತಿದ್ದು, ಪ್ರತಿಷ್ಠಿತ ಕಾಲೇಜುಗಳಲ್ಲಿನ ವಿದ್ಯಾರ್ಥಿಗಳು ತೊಂದರೆಗೆ ಈಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ದಂಧೆಯನ್ನು ತಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಆ) ಈ ದಂಧೆಯಲ್ಲಿ ಗಣ್ಯ ವ್ಯಕ್ತಿಗಳ ಹಸ್ತಕ್ಷೇಪವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ವ್ಯಕ್ತಿಗಳ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಇದುವರೆಗೂ ಎಷ್ಟು ಅಪರಾಧಿಗಳ ವಿರುದ್ಧ ಕ್ರಮ ಕೈಗೊಂಡು ಅವರನ್ನು ಬಂಧಿಸಲಾಗಿದೆ?